ನಿರ್ದೇಶಿಸಲಾಗಿದೆ. ತನಿಖಾ ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶದಲ್ಲಿ ವ್ಯತ್ಯಾಸ.

ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ : 158 (407)

ಶ್ರೀ ಯು.ಆರ್.ಸಭಾಪತಿ:- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಈ ಬಾರಿ ಎಸ್.ಎಸ್.ಎಲ್.ಸಿ ಫಲಿತಾಂಶ ಪ್ರಕಟಣೆಯಲ್ಲಿ ಕೆಲವು ವ್ಯತ್ಯಾಸಗಳು ಆಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಫಲಿತಾಂಶಗಳ ಅಂಕಗಳ ಮರು ಎಣಿಕೆಗೆ ಕೋರಿ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು?

ಇ) ಈ ಬಗ್ಗೆ ಸರಕಾರದವರು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೆಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಇಲ್ಲ.

ಆ) 11874.

ಇ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಅಂಕಗಳ ಮರು ಎಣಿಕೆ ಕಾರ್ಯ ನಡೆಸಿ ಅರ್ಜಿದಾರರಿಗೆ ಉತ್ತರಗಳನ್ನು ನೀಡಲಾಗುತ್ತಿದೆ.

ವಿಷಯ:- ಪ್ರಾಥಮಿಕ ಶಾಲ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 159 (402)

ಶ್ರೀ ಡಿ.ವಿ.ಸದಾನಂದ ಗೌಡ (ಪುತ್ತೂರು):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ವರ್ಷ ಸರ್ಕಾರದವರು ನೀಡಿದ ಆಶ್ವಾಸನೆಯಂತೆ ಪ್ರಾಥಮಿಕ ಶಿಕ್ಷಕರ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು;

ಆ) ಪ್ರಸ್ತುತ, ಖಾಲಿ ಇರುವ ಹುದ್ದೆಗಳೆಷ್ಟು? (ಜಿಲ್ಲಾವಾರು ವಿವರಗಳನ್ನು ಒದಗಿಸುವುದು).

ಇ) ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಶ್ರೀ ಹೆಚ್.ಜಿ.ಗೋವಿಂದೆಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಿನಾಂಕ 30-8-95ರ ಅಂತ್ಯಕ್ಕೆ ಖಾಲಿ ಇದ್ದ